**ಕರ್ನಾಟಕ ಅರಣ್ಯ ಇಲಾಖೆ**

**ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮುಖ್ಯಸ್ಥರು, ಅರಣ್ಯ ಪಡೆ) ಹಾಗೂ ಆಯ್ಕೆ ಪ್ರಾಧಿಕಾರ ಇವರ ಕಚೇರಿ, ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು-560003**

**ಉಪ ವಲಯ ಅರಣ್ಯಾಧಿಕಾರಿ ಮತ್ತು ಅರಣ್ಯ ರಕ್ಷಕ ಹುದ್ದೆಗಳಿಗೆ ನೇರ ನೇಮಕಾತಿ**

**(ಅಧಿಸೂಚನೆ ಸಂಖ್ಯೆ: ಬಿ9-ನೇಮಕಾತಿ-ವಿವ-3/2012-13 ದಿನಾಂಕ 21-12-2012 ಮತ್ತು ಅಧಿಸೂಚನೆ ಸಂಖ್ಯೆ: ಬಿ9-ನೇಮಕಾತಿ-ವಿವ-4/2012-13 ದಿನಾಂಕ 13-03-2013)**

# ಪ್ರಕಟಣೆ

113 ಉಪ ವಲಯ ಅರಣ್ಯಾಧಿಕಾರಿ ಮತ್ತು 329 ಅರಣ್ಯ ರಕ್ಷಕ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆ ಕುರಿತು ದಿನಾಂಕ 18-01-2015 ರಂದು ಅರ್ಹ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯನ್ನು ನಡೆಸಲಾಗಿತ್ತು. ಪ್ರಶ್ನೆಗಳಿಗೆ ನಿಗದಿಪಡಿಸಿದ ಸರಿಯಾದ ಉತ್ತರಗಳ ಕುರಿತು ಅಭ್ಯರ್ಥಿಗಳಿಂದ ಆಕ್ಷೇಪಣೆಗಳನ್ನು ಸ್ವೀಕರಿಸಿ, ಸ್ವೀಕರಿಸಿದ ಆಕ್ಷೇಪಣೆಗಳನ್ನು ಸೂಕ್ತ ರೀತಿಯಲ್ಲಿ ದಿನಾಂಕ 29-1-2015ರ ಪ್ರಕಟಣೆಯಲ್ಲಿ ವಿಲೇಗೊಳಿಸಲಾಗಿದೆ. ಅಭ್ಯರ್ಥಿಗಳು ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

ಅಭ್ಯರ್ಥಿಗಳು ಪಡೆದ ಅಂಕಗಳ ಕುರಿತು ಅಭ್ಯರ್ಥಿಗಳಿಗೆ ಏನಾದರೂ ಆಕ್ಷೇಪಣೆಗಳಿದ್ದಲ್ಲಿ ಪೂರಕ ದಾಖಲೆಗಳೊಂದಿಗೆ ಇಲಾಖಾ ವೆಬ್‌ಸೈಟ್ www.aranya.gov.in ನಲ್ಲಿ ಇರುವ ಬ್ಲಾಗ್‌ನ ಕಾಮೆಂಟ್ ಅಡಿಯಲ್ಲಿ ದಿನಾಂಕ 16-2-2015 ಸಂಜೆ 6.00 ಗಂಟೆಯೊಳಗೆ ಸಲ್ಲಿಸಬಹುದಾಗಿದೆ. ನಂತರ ಬರುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಬೆಂಗಳೂರು,
ದಿನಾಂಕ: 31-01-2015

**ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ**
**(ಸಿಬ್ಬಂದಿ ಮತ್ತು ನೇಮಕಾತಿ)**